**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 83 (10) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಟಿ.ರವಿ<br>(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 17.08.2026 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ವಿಶ್ವವಿದ್ಯಾಲಯಗಳಿವೆ; ಬೋಧಕ ಮತ್ತು ಬೋಧಕೇತರ ಹುದ್ದೆಗಳು ಸೇರಿದಂತೆ ಈ ವಿಶ್ವವಿದ್ಯಾಲಯಗಳಿಗೆ ಎಷ್ಟು ಹುದ್ದೆಗಳು ಮಂಜೂರಾಗಿವೆ; ಖಾಲಿ ಇರುವ ಹುದ್ದೆಗಳೆಷ್ಟು; (ವಿಶ್ವವಿದ್ಯಾಲಯವಾರು ವಿವರ ನೀಡುವುದು); | ರಾಜ್ಯದಲ್ಲಿ ಒಟ್ಟು 32 ಸರ್ಕಾರಿ ವಿಶ್ವವಿದ್ಯಾಲಯಗಳಿವೆ. ಈ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ವೃಂದಗಳನ್ನು ಸೇರಿ ಒಟ್ಟು 13,555 ಹುದ್ದೆಗಳು ಮಂಜೂರಾಗಿವೆ. ಈ ವೃಂದಗಳ ಹುದ್ದೆಗಳಲ್ಲಿ ಬೋಧಕ ವೃಂದದಲ್ಲಿ 3052 ಹಾಗೂ ಬೋಧಕೇತರ ವೃಂದದಲ್ಲಿ 6295 ಸೇರಿ ಒಟ್ಟು 9,347 ಹುದ್ದೆಗಳು ಖಾಲಿ ಇವೆ. ವಿಶ್ವವಿದ್ಯಾಲಯವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| (ಆ) | ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ 3 ವರ್ಷದಿಂದ ಎಷ್ಟು ಖಾಲಿ ಹುದ್ದೆಗಳು ಭರ್ತಿ ಆಗಿದೆ; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು) | ಬಂದಿದೆ.<br><br>ರಾಜ್ಯದಲ್ಲಿನ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ ವೃಂದದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ 1000 ಹುದ್ದೆಗಳನ್ನು ಹಂತ ಹಂತವಾಗಿ ತರ್ಕಬದ್ಧಗೊಳಿಸಿದ ನಂತರ ಭರ್ತಿ ಮಾಡಲಾಗುವುದು ಎಂದು 2026-27ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದ್ದು, ಸದರಿ ಪ್ರಕ್ರಿಯೆಯು ಪ್ರಸ್ತುತ ಜಾರಿಯಲ್ಲಿರುತ್ತದೆ.<br><br>ಬೋಧಕೇತರ ಹುದ್ದೆಗಳ ಭರ್ತಿಗೆ |

| | | |
|---|---|---|
| | | ಸಂಬಂಧಿಸಿದಂತೆ ಸರ್ಕಾರದಲ್ಲಿ ಸಾರ್ವಜನಿಕ ವಿಶ್ವವಿದ್ಯಾಲಯಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳ ಬಗ್ಗೆ ಆರ್ಥಿಕ ಇಲಾಖೆಯ ಸಹಮತಿ ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ.<br><br>ವಿಶ್ವವಿದ್ಯಾಲಯಗಳಲ್ಲಿ ಕಳೆದ 03 ವರ್ಷಗಳಿಂದ ಒಟ್ಟು 89 ವಿವಿಧ ವೃಂದದ ಹುದ್ದೆಗಳನ್ನು ಭರ್ತಿ ಮಾಡಿದ್ದು, ಮಾಹಿತಿಯನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ. |
| (ಇ) | ಕಳೆದ 3 ವರ್ಷದಿಂದ ಈ ವಿಶ್ವವಿದ್ಯಾಲಯಗಳಿಗೆ ಮೂಲಭೂತ ಸೌಲಭ್ಯಕ್ಕಾಗಿ ಮಂಜೂರು ಮಾಡಿರುವ/ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಈ ಅನುದಾನವನ್ನು ಯಾವ ಉದ್ದೇಶಕ್ಕೆ ವೆಚ್ಚ ಮಾಡಲಾಗಿದೆ; (ವಿಶ್ವವಿದ್ಯಾಲಯವಾರು ವಿವರ ನೀಡುವುದು) | ಕಳೆದ 3 ವರ್ಷಗಳಲ್ಲಿ ವಿಶ್ವವಿದ್ಯಾನಿಲಯಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಅನುದಾನದ ವಿವರಗಳು ಹಾಗೂ ಈ ಅನುದಾನವನ್ನು ವೆಚ್ಚಗೊಳಿಸಿರುವ ಉದ್ದೇಶದ ಮಾಹಿತಿಯನ್ನು ಅನುಬಂಧ-3 ರಲ್ಲಿ ಒದಗಿಸಿದೆ. |
| (ಈ) | ಹಣದ ಕೊರತೆಯಿಂದ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿರುವ ವಿಶ್ವವಿದ್ಯಾಲಯಗಳು ಯಾವುವು; ಆರ್ಥಿಕ ಸಂಕಷ್ಟಕ್ಕೆ ಸಿಲುಕಲು ಕಾರಣಗಳೇನು; (ವಿಶ್ವವಿದ್ಯಾಲಯವಾರು ವಿವರ ನೀಡುವುದು) | ಪ್ರತಿ ಆಯವ್ಯಯದಲ್ಲಿ ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯ ವಿಶ್ವವಿದ್ಯಾಲಯಗಳಿಗೆ ವೇತನ ಹಾಗೂ ವಿಶ್ರಾಂತಿ ವೇತನಕ್ಕೆ ಅಗತ್ಯವಿರುವ ಭಾಗಶಃ ಅನುದಾನವನ್ನು ಒದಗಿಸಲಾಗುತ್ತಿದೆ.<br><br>ವಿಶ್ವವಿದ್ಯಾಲಯಗಳು ತಮ್ಮ ಶೈಕ್ಷಣಿಕ ಚಟುವಟಿಕೆಗಳಿಗೆ ಮತ್ತು ಇನ್ನಿತರೆ ವೆಚ್ಚಗಳನ್ನು ಆಂತರಿಕ ಸಂಪನ್ಮೂಲದಿಂದ ಭರಿಸಿಕೊಳ್ಳಬೇಕಾಗುತ್ತದೆ.<br><br>ವಿಶ್ವವಿದ್ಯಾಲಯಗಳು ತಮ್ಮಲ್ಲಿ ಖಾಲಿ ಹುದ್ದೆಗಳಿಗಿಂತ ಹೆಚ್ಚುವರಿ ಹುದ್ದೆಗಳ ನೇಮಕಾತಿಯನ್ನು ನಿರ್ಬಂಧಿಸುವಂತೆ ಹಾಗೂ ಆಡಳಿತಾತ್ಮಕ ವೆಚ್ಚಗಳನ್ನು/ವೇತನ ವೆಚ್ಚಗಳನ್ನು ತಗ್ಗಿಸುವಂತೆ ಸೂಚಿಸಲಾಗಿದೆ.<br><br>ಮುಂದುವರೆದು, ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ |
| (ಉ) | ಈ ವಿಶ್ವವಿದ್ಯಾಲಯಗಳನ್ನು ಆರ್ಥಿಕ ಸಂಕಷ್ಟದಿಂದ ಪಾರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳಿಗೆ ನೀಡಿರುವ ಸೂಚನೆ ಏನು? | |

| | | |
|---|---|---|
| | | ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ<br><br>ರಾಜ್ಯದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಇಡಿ/433/ಯುಆರ್‌ಸಿ/2026**

**(ಬಸವರಾಜ ರಾಯರೆಡ್ಡಿ)**
ಉನ್ನತ ಶಿಕ್ಷಣ ಸಚಿವರು

## ಅನುಬಂಧ-1

| ಕ್ರ. ಸಂ | ವಿಶ್ವವಿದ್ಯಾನಿಲಯ ಹೆಸರು | ಬೋಧಕ ವೃಂದ | | ಬೋಧಕೇತರ ವೃಂದ | |
|---|---|---|---|---|---|
| | | ಮಂಜೂರಾದ ಹುದ್ದೆ | ಖಾಲಿ ಹುದ್ದೆ | ಮಂಜೂರಾದ ಹುದ್ದೆ | ಖಾಲಿ ಹುದ್ದೆ |
| 1 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 365 | 252 | 1176 | 799 |
| 2 | ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು | 161 | 152 | 123 | 117 |
| 3 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ | 74 | 70 | 96 | 90 |
| 4 | ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 121 | 47 | 246 | 122 |
| 5 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 214 | 101 | 214 | 168 |
| 6 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 576 | 393 | 1201 | 860 |
| 7 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 273 | 160 | 547 | 374 |
| 8 | ನೃಪತುಂಗ ವಿಶ್ವವಿದ್ಯಾಲಯ, ನೃಪತುಂಗ ರಸ್ತೆ, ಬೆಂಗಳೂರು | 100 | 100 | 43 | 43 |
| 9 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 73 | 38 | 234 | 96 |
| 10 | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | 12 | 09 | 51 | 51 |
| 11 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 24 | 24 | 167 | 167 |
| 12 | ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 103 | 47 | 173 | 163 |
| 13 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 47 | 47 | 253 | 253 |
| 14 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | 272 | 272 | 168 | 168 |
| 15 | ಕೊಡಗು ವಿಶ್ವವಿದ್ಯಾಲಯ, ಕೊಡಗು | 80 | 80 | 108 | 108 |
| 16 | ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯುನಿವರ್ಸಿಟಿ, ಬೆಂಗಳೂರು-560056 | 06 | 06 | 49 | 49 |
| 17 | ಬೀದರ್ ವಿಶ್ವವಿದ್ಯಾಲಯ, ಬೀದರ್ | 29 | 29 | 108 | 108 |
| 18 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | 139 | 56 | 102 | 72 |
| 19 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 12 | 12 | 34 | 34 |
| 20 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೋಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ | 18 | 10 | 35 | 18 |
| 21 | ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ, ಮೈಸೂರು | 15 | 15 | 19 | 19 |
| 22 | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | 206 | 182 | 433 | 278 |
| 23 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 571 | 405 | 799 | 396 |
| 24 | ಹಾಸನ ವಿಶ್ವವಿದ್ಯಾಲಯ, ಹಾಸನ | 27 | 27 | 245 | 245 |
| 25 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | 36 | 36 | 90 | 90 |
| 26 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು | 31 | 28 | 268 | 169 |
| 27 | ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ | 238 | 113 | 591 | 366 |
| 28 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 80 | 80 | 178 | 141 |
| 29 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 133 | 67 | 575 | 310 |

| | | | | | |
|---|---|---|---|---|---|
| 30 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | 228 | 93 | 425 | 130 |
| 31 | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಬೆಂಗಳೂರು | 139 | 78 | 294 | 267 |
| 32 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು | 45 | 23 | 62 | 24 |
| | **ಒಟ್ಟು** | **4448** | **3052** | **9107** | **6295** |

# ಅನುಬಂಧ-2

| ಕ್ರ.ಸಂ | ವಿಶ್ವವಿದ್ಯಾನಿಲಯ ಹೆಸರು | ಕಳೆದ 3 ವರ್ಷಗಳಿಂದ ಭರ್ತಿಮಾಡಿರುವ ಹುದ್ದೆಗಳ ಸಂಖ್ಯೆ |
|---|---|---|
| 1 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | ಕಳೆದ 03 ವರ್ಷಗಳಲ್ಲಿ 18 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 2 | ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 3 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 4 | ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | ಕಳೆದ 03 ವರ್ಷಗಳಲ್ಲಿ 10 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 5 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 6 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | ಕಳೆದ 03 ವರ್ಷಗಳಿಲ್ಲಿ 30 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 7 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | ಕಳೆದ 03 ವರ್ಷಗಳಿಲ್ಲಿ 01 ದ್ವಿದಸ ಮತ್ತು 01 ಪ್ರದಸ ಒಟ್ಟು 02 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 8 | ನೃಪತುಂಗ ವಿಶ್ವವಿದ್ಯಾಲಯ, ನೃಪತುಂಗ ರಸ್ತೆ, ಬೆಂಗಳೂರು | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 9 | ಕನ್ನಡ ವಿಶ್ವವಿದ್ಯಾಲಯ, ಹಂಪಿ | ಕಳೆದ 03 ವರ್ಷಗಳಲ್ಲಿ ಅನುಕಂಪದ ಆಧಾರದ ಮೇಲೆ 02 'ಡಿ' ದರ್ಜೆ ನೌಕರ ಹುದ್ದೆಯನ್ನು ಭರ್ತಿ ಮಾಡಲಾಗಿದೆ. |
| 10 | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 11 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 12 | ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 13 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | ಕಳೆದ 03 ವರ್ಷಗಳಿಲ್ಲಿ ಯಾವುದೇ |

| | | |
|---|---|---|
| | | ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 14 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 15 | ಕೊಡಗು ವಿಶ್ವವಿದ್ಯಾಲಯ, ಕೊಡಗು | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 16 | ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯುನಿವರ್ಸಿಟಿ, ಬೆಂಗಳೂರು-560056 | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 17 | ಬೀದರ್ ವಿಶ್ವವಿದ್ಯಾಲಯ, ಬೀದರ್ | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 18 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 19 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 20 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೋಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 21 | ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ, ಮೈಸೂರು | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 22 | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿ ಅನುಕಂಪದ ಆಧಾರದ ಮೇಲೆ ಸಿಪಾಯಿ-01 ಉದ್ಯಾನ ಕೆಲಸಗಾರ-01 ಭರ್ತಿ ಮಾಡಲಾಗಿದೆ. |
| 23 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | ಕಳೆದ 03 ವರ್ಷಗಳಲ್ಲಿ ದ್ವಿದಸ ಮತ್ತು 4ನೇ ದರ್ಜೆ ಸಹಾಯಕರ ವೃಂದಕ್ಕೆ 08 ಅಭ್ಯರ್ಥಿಗಳನ್ನು ಅನುಕಂಪದ ಆಧಾರದ ಮೇಲೆ ನೇಮಕ ಮಾಡಲಾಗಿದೆ. |
| 24 | ಹಾಸನ ವಿಶ್ವವಿದ್ಯಾಲಯ, ಹಾಸನ | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 25 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | ಕಳೆದ 03 ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 26 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ | ಕಳೆದ 03 ವರ್ಷಗಳಲ್ಲಿ 03 ಬೋಧಕ |

| | | |
|---|---|---|
| | ವಿಶ್ವವಿದ್ಯಾಲಯ, ರಾಯಚೂರು | ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 27 | ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ | ಕಳೆದ 03 ವರ್ಷಗಳಿಲ್ಲಿ 03 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 28 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | ಕಳೆದ 03 ವರ್ಷಗಳಿಲ್ಲಿ 10 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| 29 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 30 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |
| 31 | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಬೆಂಗಳೂರು | ಕಳೆದ 03 ವರ್ಷಗಳಲ್ಲಿ 01 ಸಹಾಯಕ ಪ್ರಾಧ್ಯಾಪಕರ ಹುದ್ದೆಯನ್ನು ಭರ್ತಿ ಮಾಡಲಾಗಿದೆ. |
| 32 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು | ಕಳೆದ 03 ವರ್ಷಗಳಿಲ್ಲಿ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ. |

ಅನುಬಂಧ-3

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ಒದಗಿಸಿದ ಮತ್ತು ಬಿಡುಗಡೆ ಮಾಡಿರುವ ಅನುದಾನದ ವಿವರ:

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ವಿಶ್ವವಿದ್ಯಾಲಯಗಳು | ಉದ್ದೇಶ | 2023-24 | 2024-25 | 2025-26 | ವೆಚ್ಚಗೊಳಿಸಿರುವ ಉದ್ದೇಶ |
|---|---|---|---|---|---|---|
| 1. | ಕನ್ನಡ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 257.73 | 391.50 | 391.50 | ವಿಶ್ವವಿದ್ಯಾಲಯದ ಅಭಿವೃದ್ಧಿ ಹಾಗೂ ಬಾಕಿ ವಿದ್ಯುತ್ ಬಿಲ್ ಪಾವತಿಸಲು ಬಳಸಲಾಗಿದೆ. |
| 2. | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 0.00 | 100.00 | 100.00 | ಪಿಠೋಪಕರಣ ಖರೀದಿ (Students desks, Racks etc) ಮತ್ತು ಉಪಕರಣಗಳ ಖರೀದಿ ಮಾಡಲಾಗಿದೆ (ಪ್ರಯೋಗಾಲಯದ ಉಪಕರಣಗಳು, ಕಂಪ್ಯೂಟರ್, ಪ್ರೊಜೆಕ್ಟರ್, ಇತ್ಯಾದಿ) |
| 3. | ತುಮಕೂರು ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 1000.00 | 500.00 | 500.00 | ವಿಶ್ವವಿದ್ಯಾನಿಲಯದ ಮೂಲಭೂತ ಸೌಕರ್ಯಕ್ಕಾಗಿ ವೆಚ್ಚ ಮಾಡಲಾಗಿದೆ. |
| 4. | ಜನಪದ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 75.99 | 76.00 | 38.00 | ವಿಶ್ವವಿದ್ಯಾಲಯವು ತಾತ್ಕಾಲಿಕ ಸಿಬ್ಬಂದಿಗಳ ವೇತನ, ವಿದ್ಯುತ್ ಬಿಲ್, ಸಭೆ ಸಮಾರಂಭಗಳು ಮತ್ತು ಶೈಕ್ಷಣಿಕ ಚಟುವಟಿಕೆಗಳಿಗೆ ವಾಹನಗಳ ನಿರ್ವಹಣೆ ಇತರ ವೆಚ್ಚಗಳಿಗೆ ಬಳಸಲಾಗಿದೆ. |
| 5. | ಸಂಗೀತ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 150.00 | 100.00 | 100.00 | ವಿಶ್ವವಿದ್ಯಾಲಯ ಹೊರಗುತ್ತಿಗೆ ಸಿಬ್ಬಂದಿಗಳ ವೇತನಕ್ಕಾಗಿ, ಅಭಿವೃದ್ಧಿ ಕಾರ್ಯಗಳಿಗೆ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಹಾಗೂ ಕಚೇರಿ ಖರ್ಚು ವೆಚ್ಚಗಳಿಗಾಗಿ ಸದರಿ ಅನುದಾನವನ್ನು ಬಳಸಲಾಗಿರುತ್ತದೆ. |
| 6. | ಸಂಸ್ಕೃತ ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 0.00 | 100.00 | 200.00 | ಮೂಲಭೂತ ಸೌಲಭ್ಯದ ಉದ್ದೇಶಕ್ಕಾಗಿ ವೆಚ್ಚ ಮಾಡಲಾಗಿದೆ. |
| 7. | ಡಾ|| ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ | ಸಹಾಯಾನುದಾನ ಆಸ್ತಿಗಳ ಸೃಜನೆ | 0.00 | 164.10 | 100.00 | ಸೌರ ವಿದ್ಯುತ್ ಉತ್ಪಾದನಾ ಘಟಕ ಮತ್ತು ಕಂಪ್ಯೂಟರ್ ಲ್ಯಾಬ್ ಅಭಿವೃದ್ಧಿ, ಬೋಧನಾ ಕೊಠಡಿಗಳ ಮೂಲ ಸೌಕರ್ಯ ಅಭಿವೃದ್ಧಿ, ಅತಿಥಿ ಗೃಹ ಕೊಠಡಿಗಳ ಮೇಲ್ದರ್ಜೆಗೇರಿಸಲು ಬಳಕೆ ಮಾಡಲಾಗಿದೆ. |
| 8. | ನೃಪತುಂಗ ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 66.67 | 50.00 | 0.00 | ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಬಳಸಲಾಗಿದೆ. |
| 9. | ಮಹಾರಾಣಿ ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 100.00 | 50.00 | 0.00 | ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯದ ಮೂಲಭೂತ ಸೌಲಭ್ಯಕ್ಕಾಗಿ ಬಳಸಲಾಗಿದೆ. |
| 10. | ರಾಯಚೂರು ವಿ.ವಿ. | ಸಹಾಯಾನುದಾನ ಆಸ್ತಿಗಳ ಸೃಜನೆ | 0.00 | 0.00 | 75.00 | ವಿಶ್ವವಿದ್ಯಾನಿಲಯದ ಆವರಣದಲ್ಲಿ ಮಹಿಳಾ ಸಿಬ್ಬಂದಿ/ವಿದ್ಯಾರ್ಥಿನಿಯರಿಗಾಗಿ ಮೂಲಭೂತ ಸೌಲಭ್ಯವುಳ್ಳ ವಿಶ್ರಾಂತಿ ಗೃಹ ನಿರ್ಮಾಣ ಮಾಡಲಾಗಿದೆ. |
| 11. | ವಿಶ್ವೇಶ್ವರಯ್ಯ ವಿಶ್ವವಿದ್ಯಾಲಯದ ಎಂಜಿನಿಯರಿಂಗ್ ಕಾಲೇಜು (ಯು.ವಿ.ಸಿ.ಇ) | ಸಹಾಯಾನುದಾನ ಆಸ್ತಿಗಳ ಸೃಜನೆ | 2500.00 | 1500.00 | 5000.00 | ಅಸ್ತಿತ್ವದಲ್ಲಿರುವ ಕಟ್ಟಡದ ನವೀಕರಣ ಮತ್ತು ದುರಸ್ತಿ, ಪ್ರಯೋಗಾಲಯದ ಉಪಕರಣಗಳು ಮತ್ತು ಗ್ರಂಥಾಲಯದ ಪುಸ್ತಕಗಳ ಖರೀದಿಗಾಗಿ ಮತ್ತು ಹಾಸ್ಟೆಲ್ ಪಿಠೋಪಕರಣಗಳ ಖರೀದಿಗೆ ಬಳಕೆ ಮಾಡಲಾಗಿದೆ. |
| | | ಒಟ್ಟು | 4150.39 | 3031.60 | 6504.50 | |